## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಹಣ ಬಿಡುಗಡೆ ಭರವಸೆ ನೀಡಿದ ಸಿಎಂ ಬಿಎಸ್‌ವೈ

# ₹450 ಕೋಟಿ ಬಾಕಿ ಅನುದಾನ ಶೀಘ್ರ ಬಿಡುಗಡೆ

**ವಿಶ್ವವಾಣಿ ಸುದ್ದಿಮನೆ** ವಿಧಾನಪರಿಷತ್

ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಡಿ 450 ಕೋಟಿ ರು. ಬಾಕಿ ಅನುದಾನವನ್ನು ತಕ್ಷಣ ಬಿಡುಗಡೆಗೊಳಿಸಲಾಗುತ್ತದೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಭರವಸೆ ನೀಡಿದರು.

ವಿಧಾನಪರಿಷತ್‌ನ ಮಧ್ಯಾಹ್ನದ ಕಲಾಪದ ವೇಳೆ ಮುಖ್ಯಮಂತ್ರಿಗಳ ಉತ್ತರದ ನಂತರ ನಡೆದ ಸ್ಪಷ್ಟೀಕರಣ ಕಲಾಪದಲ್ಲಿ ಜೆಡಿಎಸ್ ಸದಸ್ಯ ಬೋಜೇಗೌಡ ಮಾತನಾಡಿ, ಶಾಸಕರ ನಿಧಿ ಬಿಡುಗಡೆಯಾಗಿಲ್ಲ. ಈ ತಿಂಗಳ ಒಳಗೆ ಹಣ ಬಿಡುಗಡೆಯಾಗದೇ ಹೋದಲ್ಲಿ ಅನುದಾನ ಲ್ಯಾಪ್ಸ್ ಆಗಲಿದೆ. ಹಾಗಾಗಿ ಕೂಡಲೇ ಶಾಸಕರ ಅನುದಾನದ 450 ಕೋಟಿ ರು. ಹಣವನ್ನು ಬಿಡುಗಡೆ ಮಾಡಬೇಕು ಎಂದು ಮುಖ್ಯಮಂತ್ರಿಗಳನ್ನು ಒತ್ತಾಯಿಸಿದರು.

ಇದಕ್ಕೆ ಉತ್ತರಿಸಿದ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ, ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಗೆ 700 ಕೋಟಿ ರು. ಪಿಡಿ ಖಾತೆಯಲ್ಲಿದೆ. ಆದರೆ ಅದರ ಬಳಕೆ ಹೇಗೆ ಎಂದು ಮುಂದೆ ನೋಡೋಣ. ಈಗ ಸದಸ್ಯರ ಬೇಡಿಕೆಯಂತೆ ತಕ್ಷಣಕ್ಕೆ ಬಾಕಿರುವ 450 ಕೋಟಿ ರು. ಬಿಡುಗಡೆಗೆ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.



### ಯುಕೆಪಿಗೆ ಕೇಂದ್ರ ಸರಕಾರದ ನೆರವು

ಕೃಷ್ಣಾ ಮೇಲ್ದಂಡೆ ಮೂರನೇ ಹಂತದ ಯೋಜನೆ ಸಂಬಂಧ ಕೇಂದ್ರ ಜಲಸಂಪನ್ಮೂಲ ಸಚಿವರು, ಅಧಿಕಾರಿಗಳನ್ನು ಭೇಟಿ ಮಾಡಿ ಯೋಜನೆ ಅನುಷ್ಠಾನಕ್ಕೆ ಹೆಚ್ಚು ಹಣ ನೀಡಲು ಒತ್ತಾಯ ಮಾಡಲಾಗುತ್ತದೆ. ಅಮೃತ್ ಮಹಲ್ ಬಳಿ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳುವ ಜತೆಗೆ ಅಮೃತ ಮಹಲ್ ಕಾವಲ್ ಭೂಮಿ ಕಬಳಿಕೆ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತದೆ. ಇರುವ ಭೂಮಿ ಉಳಿಸಿಕೊಳ್ಳಲು ಖುದ್ದು ನಾನೇ ಭೇಟಿ ನೀಡಿ ಪರಿಶೀಲನೆ ನಡೆಸುತ್ತೇನೆ. ಹೈದರಾಬಾದ್-ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆ ಭರ್ತಿಗೆ ಗಮನ ಹರಿಸಲಾಗುತ್ತದೆ. ಬೆಂಗಳೂರಿನಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತದೆ. ರಸ್ತೆಗಳ ವ್ಯವಸ್ಥೆ, ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಕ್ರಮ ಕೈಗೊಂಡು ಎರಡು ಮೂರು ವರ್ಷದಲ್ಲಿ ಬೆಂಗಳೂರು ಅಭಿವೃದ್ಧಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ನಂತರ ಧ್ವನಿ ಮತದ ಮೂಲಕ ರಾಜ್ಯಪಾಲರ ಭಾಷಣದ ವಂದನಾ ನಿರ್ಣಯವನ್ನು ವಿಧಾನ ಪರಿಷತ್ ಅಂಗೀಕರಿಸಿತು.

### ಉಪ ಚುನಾವಣೆಯಲ್ಲಿ ಪ್ರಜಾಪ್ರಭುತ್ವದ ಕಗ್ಗೊಲೆ

ವಿಧಾನಪರಿಷತ್: ರಾಜ್ಯದಲ್ಲಿ ಇತ್ತೀಚೆಗೆ ನಡೆದ ಉಪ ಚುನಾವಣೆಯಲ್ಲಿ ಪ್ರಜಾಪ್ರಭುತ್ವದ ಕಗ್ಗೊಲೆ ಮಾಡಲಾಗಿದ್ದು, ಆ ಮೂಲಕ ಬಿಜೆಪಿ ಅಧಿಕಾರಕ್ಕೆ ಬಂದಿದೆ ಎಂದು ಕಾಂಗ್ರೆಸ್ ಮತ್ತು ಜೆಡಿಎಸ್ ಸದಸ್ಯರು ಟೀಕಿಸಿದ್ದು, ಇದಕ್ಕೆ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು.ಸೋಮವಾರ ವಿಧಾನ ಪರಿಷತ್‌ನಲ್ಲಿ ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮಾತನಾಡಿ, ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರುತ್ತಿದ್ದಂತೆ 25 ಲೋಕಸಭಾ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲಾಗಿದೆ. 15 ವಿಧಾನಸಭಾ ಕ್ಷೇತ್ರಗಳಲ್ಲಿ ನಡೆದ ಉಪ ಚುನಾವಣೆಯಲ್ಲಿ 12 ಸ್ಥಾನಗಳಲ್ಲಿ ಬಿಜೆಪಿ ಗೆಲುವು ಸಾಧಿಸಿದ್ದು, ರಾಜ್ಯದ ಜನತೆ ಬಿಜೆಪಿ ಪರವಾಗಿದೆ ಎಂಬುದನ್ನು ತಿಳಿಸುತ್ತದೆ ಎಂದು ಹೇಳಿದರು.ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಕಾಂಗ್ರೆಸ್ ಮತ್ತು ಜೆಡಿಎಸ್ ಸದಸ್ಯರು, ರಾಜ್ಯದಲ್ಲಿ ನಡೆದ ಉಪ ಚುನಾವಣೆಯಲ್ಲಿ ಪ್ರಜಾಪ್ರಭುತ್ವ ಕಗ್ಗೊಲೆ ಯಾಗಿದೆ. ಕಾಂಗ್ರೆಸ್ ಮತ್ತು ಜೆಡಿಎಸ್ ಶಾಸಕರಿಂದ ರಾಜೀನಾಮೆ ಪಡೆದು ನಂತರ ಅಧಿಕಾರಕ್ಕೆ ಬಂದಿದ್ದೀರಿ. ರಾಜೀನಾಮೆ ನೀಡಿದ್ದ ಶಾಸಕರನ್ನು ಮುಂಬೈನಲ್ಲಿ 15 ದಿನಗಳ ಕಾಲ ಕೂಡಿ ಹಾಕಲಾಗಿತ್ತು. ಅವರ ಕುಟುಂಬದ ಸದಸ್ಯರಿಂದು ದೂರ ಇರಿಸಲಾಗಿತ್ತು. ಈ ಮೂಲಕ ಅಧಿಕಾರಕ್ಕೆ ಬಂದಿದ್ದೀರಿ. ಇದು ಯಾವ ದೊಡ್ಡ ಸಾಧನೆ? ಅಲ್ಲದೆ, ಸ್ಥಳೀಯ ಮಟ್ಟದಲ್ಲಿ ನಡೆದ ಚುನಾವಣೆಯ ಫಲಿತಾಂಶವನ್ನು ಉಲ್ಲೇಖಿಸಿ ಎಂದು ಎಂದು ಪ್ರಶ್ನಿಸಿದರು.ಇದಕ್ಕೆ ಪ್ರತಿಕ್ರಿಯೆ ನೀಡಿದ ಬಿಜೆಪಿ ಸದಸ್ಯರು, ಕಾನೂನು ಬದ್ಧವಾಗಿ ಅಧಿಕಾರಕ್ಕೆ ಬಂದಿದ್ದೇವೆ. ಯಾವುದೇ ಅಕ್ರಮಗಳನ್ನು ಮಾಡಿಲ್ಲ. ಆದರೆ, ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಸದಸ್ಯರು ಗೆದ್ದಿದ್ದರೆ ಇದೇ ಮಾತನ್ನು ಹೇಳಲು ಸಾಧ್ಯವೇ ಎಂದು ತಿರುಗೇಟು ನೀಡಿದರು. ಈ ವೇಳೆ ಮಧ್ಯ ಪ್ರವೇಶಿಸಿದ ಕಾಂಗ್ರೆಸ್‌ನ ಎಂ.ನಾರಾಯಣಸ್ವಾಮಿ, ನಾನೂ ಸಹ ಉಪಚುನಾವಣೆ ಎದುರಿಸಿದ್ದೇನೆ. ಚುನಾವಣೆಯಲ್ಲಿ ನಡೆದ ಎಲ್ಲ ಬೆಳವಣಿಗೆಗಳ ಬಗ್ಗೆ ಅರಿವಿದೆ. ನೀವು ಹೇಗೆ ಅಧಿಕಾರಕ್ಕೆ ಬಂದಿದ್ದೀರಿ ಎಂಬುದು ರಾಜ್ಯದ ಜನತೆಗೆ ತಿಳಿದ ವಿಚಾರವಾಗಿದೆ ಎಂದರು.

ಪತ್ರಿಕೆ : NAME OF THE NEWS PAPER
DEPARTMENT / SUBJECT
ದಿನಾಂಕ : DATE : 10/03/2020